ದಿನಾಂಕ: 09.02.2010ರಂದು ಹೊರಡಿಸಲಾದ ಎಫ್‌ಡಿ 13 ಪಿಇಎಸ್ 2009ನೇ ಸಂಖ್ಯೆಯ ಅಧಿಸೂಚನೆಗಳನ್ನು ಮಂಡಿಸುತ್ತಿದ್ದೇನೆ.

I. ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಸಂಸದೀಯ ವ್ಯವಹಾರಗಳ ಮತ್ತು ಶಾಸನ ರಚನೆ ಮತ್ತು ನಗರ ಸಭೆಗಳ ಸಚಿವರು) :

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ ಅಧಿನಿಯಮದ 48 ಮತ್ತು 49ನೇ ಪ್ರಕರಣಗಳ ಮೇರೆಗೆ :

1. ಹಾವೇರಿ ನಗರಾಭಿವೃದ್ಧಿ ಪ್ರಾಧಿಕಾರದ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

II. ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು) ಅವರು:

1993ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದ 262 (3)ನೇ ಮತ್ತು 300(5)ನೇ ಪ್ರಕರಣದ ಮೇರೆಗೆ:

1. ಮೈಸೂರು ಜಿಲ್ಲಾ ಪಂಚಾಯತ್‌ನ 2007–08ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನಾ ವರದಿ.

2. ಕೊಪ್ಪಳ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ವಾರ್ಷಿಕ ಆಡಳಿತ ವರದಿ.

3. ಗದಗ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ವಾರ್ಷಿಕ ಆಡಳಿತ ವರದಿಗಳನ್ನು ಮಂಡಿಸುತ್ತಿದ್ದೇನೆ.

ಶ್ರೀ ಎಸ್. ಸುರೇಶ್ ಕುಮಾರ್, (ಕಾನೂನು, ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಶ್ರೀ ಮುರುಗೇಶ್ ರುದ್ರಪ್ಪ ನಿರಾಣಿ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಪರವಾಗಿ) :

1956ರ ಕಂಪನಿ ಅಧಿನಿಯಮದ 619 (ಎ) ಪ್ರಕರಣದ ಮೇರೆಗೆ :

1. ಕರ್ನಾಟಕ ಸೋಪ್ಸ್ ಅಂಡ್ ಡಿಟರ್ಜೆಂಟ್ಸ್ ಲಿಮಿಟೆಡ್‌ನ 2008–09ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತಿದ್ದೇನೆ.

IV. ಶ್ರೀ ಅರವಿಂದ ಎಸ್. ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) ಅವರು:

1986ರ ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿ ಅಧಿನಿಯಮದ ಪರಿಚ್ಛೇದ 24(3)ರ ಮೇರೆಗೆ:

1. ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿಯ 2008–09ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲಾಯಿತು.

ಆ) ಕಾರ್ಯದರ್ಶಿಯವರ ವರದಿ :

ಕಾರ್ಯದರ್ಶಿ : ಗೌರವಾನ್ವಿತ ಸಭಾಧ್ಯಕ್ಷರ ಅನುಮೋದನೆಯೊಂದಿಗೆ ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ ಕರ್ನಾಟಕ (ಪ್ರಾದೇಶಿಕ ಕಾನೂನುಗಳ) ನಿರಸನಗೊಳಿಸುವ ಮತ್ತು ತಿದ್ದುಪಡಿ ಮಾಡುವ ವಿಧೇಯಕ 2009 ನ್ನು ಈಗ ಸಭೆಯ ಮುಂದಿಡುತ್ತೇನೆ.

(ಅನುಬಂಧ– 4)

ಅಧ್ಯಕ್ಷರು : ಮಂಡಿಸಲಾಯಿತು. ಈಗ ಸದನವನ್ನು ಮಧ್ಯಾಹ್ನ 3–00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಮಧ್ಯಾಹ್ನ 1–58 ಗಂಟೆಗೆ ಮುಂದೂಡಲ್ಪಟ್ಟು ಪುನಃ ಮಧ್ಯಾಹ್ನ 3–00 ಗಂಟೆಗೆ ಸೇರಲು ನಿಃಶ್ಚಯಿಸಿತು)

(ಸದನವು ಮಧ್ಯಾಹ್ನ 3 ಗಂಟೆ 20 ನಿಮಿಷಕ್ಕೆ ಸಮಾವೇಶಗೊಂಡಿತು.)

(ಮಾನ್ಯ ಸಭಾಧ್ಯಕ್ಷರು ಅಧ್ಯಕ್ಷ ಪೀಠವನ್ನು ಅಲಂಕರಿಸಿದ್ದರು)

ಅಧ್ಯಕ್ಷರು : ಈಗ ಶೂನ್ಯ ವೇಳೆ.